## ಕರ್ನಾಟಕ ರಾಜ್ಯ ನಿವೃತ್ತ ಪೊಲೀಸ್ ಅಧಿಕಾರಿಗಳ ಕ್ಷೇಮಾಭಿವೃದ್ಧಿ ಸಂಘ, ಬೆಂಗಳೂರು – 560 023.

**ದಿನಾಂಕ: 15–08–2022**

# ಸ್ವಾತಂತ್ರ್ಯ ದಿನಾಚರಣೆಯ ಅಮೃತೋತ್ಸವದ ಕಾರ್ಯಕ್ರಮದ

# ಸಚಿತ್ರಗಳ ಒಂದು ಪಕ್ಷಿ ನೋಟ

**ಕರ್ನಾಟಕ ರಾಜ್ಯ ನಿವೃತ್ತ ಪೊಲೀಸ್ ಅಧಿಕಾರಿಗಳ ಕ್ಷೇಮಾಭಿವೃದ್ಧಿ ಸಂಘವು ಸ್ವಾತಂತ್ರ್ಯ ದಿನಾಚರಣೆಯ ಅಮೃತೋತ್ಸವದ ಕಾರ್ಯಕ್ರಮವನ್ನು ದಿನಾಂಕ: 15–08–2022 ರಂದು ಸೋಮವಾರದ ಬೆಳಿಗ್ಗೆ 09–00 ಗಂಟೆಯಿಂದ ಸಂಘದ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿತ್ತು.**





**ಸಂಘದ ಅಧ್ಯಕ್ಷರಾದ ಶ್ರೀ ಬಿ.ಕೆ. ಶಿವರಾಮ್ ರವರು ಹಿರಿಯ ಸದಸ್ಯರುಗಳೊಂದಿಗೆ ದೀಪ ಬೆಳಗಿಸಿ ಮಹಾತ್ಮ ಗಾಂಧೀಜಿಯವರ ಭಾವ ಚಿತ್ರಕ್ಕೆ ಪೂಜಾ ನಮನ ಸಲ್ಲಿಸಿದರು.**







ಕಾರ್ಯಕ್ರಮದಲ್ಲಿ ಸೇರಿದ್ದ ಸದಸ್ಯರು ಹಾಗೂ ಇತರರೂ ಸಹ ಧ್ವಜಕ್ಕೆ ವಂದನೆ ಸಲ್ಲಿಸಿ ಎಲ್ಲರೂ ರಾಷ್ಟ್ರ ಗೀತೆ ಹಾಡಿದರು.





ಮಹಾತ್ಮ ಗಾಂಧೀಜಿಯವರ ಭಾವ ಚಿತ್ರಕ್ಕೆ ಪೂಜೆ ಸಲ್ಲಿಸಿದ ನಂತರ ಅಧ್ಯಕ್ಷರಾದ ಶ್ರೀ ಬಿ.ಕೆ. ಶಿವರಾಮ್ ರವರು ಧ್ವಜಾರೋಹಣವನ್ನು ನೆರವೇರಿಸಿ ರಾಷ್ಟ್ರ ಧ್ವಜಕ್ಕೆ ವಂದನೆ ಸಲ್ಲಿಸಿದರು.





ಕಾರ್ಯಕ್ರಮದಲ್ಲಿ ಸೇರಿದ್ದ ಸದಸ್ಯರು ಹಾಗೂ ಇತರರು.



ಸಂಘದ ಕಾರ್ಯದರ್ಶಿಯವರಾದ ಶ್ರೀ ಕುಮಾರ ಎಸ್. ಕರನಿಂಗ ರವರು ಕಾರ್ಯಕ್ರಮದಲ್ಲಿ ಭಾಗವಹಿಸಲು ಬಂದಿದ್ದ ಹಿರಿಯ ಸದಸ್ಯರೊಂದಿಗೆ ಎಲ್ಲರನ್ನೂ ಸ್ವಾಗತಿಸಿದರು.





\







ಸಂಘದ ಹಿರಿಯ ಸದಸ್ಯರಾದ ಶ್ರೀ. ಎಸ್. ಪಿ. ನಾಯಕ್ ರವರು ಕಾರ್ಯಕ್ರಮದಲ್ಲಿ ಮಾತನಾಡಿದರು.







ಸಂಘದ ಸದಸ್ಯರಾದ ಶ್ರೀ ಎಸ್. ಜೆ. ಹನುಮಂತೇಗೌಡ ರವರು ಈ ಸಂದರ್ಭದಲ್ಲಿ ಮಾತನಾಡಿದರು.

ಸಂಘದ ಇನ್ನೊಬ್ಬ ಸದಸ್ಯರಾದ ಶ್ರೀ ಮಂಜೇಗೌಡರವರು ತಾವೇ ರಚಿಸಿದ ರಾಷ್ಟ್ರ ಪ್ರೇಮದ ಕವನವನ್ನು ವಾಚಿಸಿದರು.





ಈ ಸಮಾರಂಭದ ರೂವಾರಿ ಶ್ರೀ ಬಿ. ಕೆ. ಶಿವರಾಮ್ ರವರು ತಮ್ಮ ಅಧ್ಯಕ್ಷೀಯ ಭಾಷಣದಲ್ಲಿ ದೇಶ ಪ್ರೇಮದ ಬಗ್ಗೆ ಮಾತನಾಡಿದರು.







ಸಂಘದ ಉಪಾಧ್ಯಕ್ಷರಾದ ಶ್ರೀ ಹೆಚ್. ಟಿ. ಕೃಷ್ಣಪ್ಪನವರು ಕಾರ್ಯಕ್ರಮದ ಸಮಾರಂಭದಲ್ಲಿ ಎಲ್ಲರಿಗೂ ವಂದನಾರ್ಪಣೆಯನ್ನು ಸಲ್ಲಿಸಿದರು.

ಸಂಘದ ಕಾರ್ಯಕಾರೀ ಸಮಿತಿಯ ಸದಸ್ಯರಾದ ಶ್ರೀ ಜಿ. ಎ. ಜಗದೀಶ್ ರವರು ನುಡಿ-ನಮನ ಸಮಾರಂಭದ ನಿರೂಪಣಾ ಕಾರ್ಯವನ್ನು ಅಚ್ಚುಕಟ್ಟಾಗಿ ನಿರ್ವಹಿಸಿದರು.



















ಕರ್ನಾಟಕ ರಾಜ್ಯ ನಿವೃತ್ತ ಪೊಲೀಸ್ ಅಧಿಕಾರಿಗಳ ಕ್ಷೇಮಾಭಿವೃದ್ಧಿ ಸಂಘದ ವತಿಯಿಂದ ಎಲ್ಲರಿಗೂ ವ್ಯವಸ್ಥೆ ಮಾಡಲಾಗಿದ್ದ ಲಘು ಉಪಾಹಾರ ದೊಂದಿಗೆ ಕಾರ್ಯಕ್ರಮ ಸಂಪೂರ್ಣ ವಾಗಿರುತ್ತದೆ.

ಕರ್ನಾಟಕ ರಾಜ್ಯ ನಿವೃತ್ತ ಪೊಲೀಸ್ ಅಧಿಕಾರಿಗಳ ಕ್ಷೇಮಾಭಿವೃದ್ಧಿ ಸಂಘ, ಬೆಂಗಳೂರು – 560 023.

* * * * *